**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಆ.ಸ/ಶಿ.ಮಿ/ಶಿ.ಸೇ.ಮಾಹಿತಿ-01/ಸಿ.ನಿಯೋ/2020-2021 ದಿನಾಂಕ:02-12-2020

-: ಸುತ್ತೋಲೆ :-

ವಿಷಯ: ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕ ಮಿತ್ರ (EEDS) ತಂತ್ರಾಂಶದಲ್ಲಿ ನಿಗಧಿತ ಅವಧಿಯಲ್ಲಿ ಇಂದೀಕರಿಸುವ ಕಾರ್ಯವನ್ನು ಕೂಡಲೇ ಪೂರ್ಣಗೊಳಿಸುವ ಬಗ್ಗೆ.

ಉಲ್ಲೇಖ: 1.ದಿನಾಂಕ:18-09-2020 ರಂದು ನಡೆದ ವಿಡಿಯೋ ಕಾನ್ಫರೆನ್ಸ್ ಸೂಚನೆಗಳಂತೆ.

2.ಈ ಕಛೇರಿ ಸುತ್ತೋಲೆ ಸಂಖ್ಯೆ: ಇ-ಆಡಳಿತ ಸೇ.ಸೇ.ಮಾಹಿತಿ 01/2020-21ದಿನಾಂಕ:25-09-2020

3. ಈ ಕಛೇರಿ ಸುತ್ತೋಲೆ ಸಂಖ್ಯೆ: ಆ.ಸ/ಶಿ.ಮಿ/ಶಿ.ಸೇ.ಮಾಹಿತಿ-01/2020-21 ದಿನಾಂಕ:03-10-2020

4. ಈ ಕಛೇರಿ ಸುತ್ತೋಲೆ ಸಂಖ್ಯೆ: ಆ.ಸ/ಶಿ.ಮಿ/ಶಿ.ಸೇ.ಮಾಹಿತಿ-01/2020-21 ದಿನಾಂಕ:22-10-2020

5. ಈ ಕಛೇರಿ ಸುತ್ತೋಲೆ ಸಂಖ್ಯೆ: ಆ.ಸ/ಶಿ.ಮಿ/ಶಿ.ಸೇ.ಮಾಹಿತಿ-01/2020-21 ದಿನಾಂಕ:03-11-2020

6.ಈ ಕಛೇರಿ ಅಧಿಕೃತ ಜ್ಞಾಪನಾ ಸಮ ಸಂಖ್ಯೆ ದಿನಾಂಕ:11/11/2020

*********

ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹ ಶಿಕ್ಷಕರ ಮಾಹಿತಿಯನ್ನು 2017 ರಿಂದ ಶಿಕ್ಷಕರ ಸೇವಾ ಮಾಹಿತಿ ತಂತ್ರಾಂಶ (TDS) ನಲ್ಲಿ ಅಳವಡಿಸಲಾಗಿರುತ್ತದೆ. ಈ ತಂತ್ರಾಂಶದಲ್ಲಿನ ಮಾಹಿತಿಯನ್ನು ಶಿಕ್ಷಕ ಮಿತ್ರ (EEDS) ತಂತ್ರಾಂಶಕ್ಕೆ ವರ್ಗಾಯಿಸಲಾಗಿರುತ್ತದೆ.

ಉಲ್ಲೇಖ(2)ರ ಸುತ್ತೋಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕಛೇರಿ ಹಂತದ ಡಿ.ಡಿ.ಓ ಗಳು ತಮ್ಮ ಅಧೀನ ಶಾಲೆ/ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ವೃಂದದ ಶಿಕ್ಷಕರು ಹಾಗೂ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ಸೇವಾ ಮಾಹಿತಿಯನ್ನು ದಿನಾಂಕ:25-09-2020ರ ಒಳಗಾಗಿ ಸೇವಾ ದಾಖಲೆಗಳೊಂದಿಗೆ ಪರಿಶೀಲಿಸಿ ಮಾಹಿತಿಯನ್ನು ತಂತ್ರಾಂಶದಲ್ಲಿ ಇಂದೀಕರಿಸಲು ಸೂಚಿಸಲಾಗಿತ್ತು. ಪರಿಶೀಲಿಸಲಾಗಿ ಇಂದೀಕರಣ ಕಾರ್ಯವು ಪೂರ್ಣಗೊಳಿಸಲು ಹೆಚ್ಚಿನ ಕಾಲಾವಕಾಶ ಅಗತ್ಯವಿರುತ್ತದೆ ಎಂದು ಹಲವಾರು ಡಿ.ಡಿ.ಓ ರವರುಗಳು ಮನವಿ ಮಾಡಿದ ಹಿನ್ನೆಲೆಯಲ್ಲಿ, ತಂತ್ರಾಂಶದಲ್ಲಿ ಮಾಹಿತಿ ಇಂದೀಕರಣ ಕಾರ್ಯವನ್ನು ಪೂರ್ಣಗೊಳಿಸಲು ಅಂತಿಮ ಗಡುವನ್ನು ಉಲ್ಲೇಖ(3) (4) (5)ರಲ್ಲಿ ದಿನಾಂಕ:29-11-2020 ರವರೆಗೆ ಮೂರು ಬಾರಿ ವಿಸ್ತರಿಸಲಾಗಿರುತ್ತದೆ.

ಮುಂದುವರೆದು 2020-21ನೇ ಸಾಲಿಗೆ (EEDS) ತಂತ್ರಾಂಶದಲ್ಲಿನ ಮಾಹಿತಿಯನ್ನು ಆಧರಿಸಿ ಸರ್ಕಾರಿ ಪ್ರಾಥಮಿಕ / ಪ್ರೌಢ ಶಾಲಾ ಶಿಕ್ಷಕರ ಮತ್ತು ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರ ವರ್ಗಾವಣಾ ಪ್ರಕ್ರಿಯೆಯನ್ನು ನಡೆಸಲು ಉಲ್ಲೇಖ[6]ರಲ್ಲಿ ಅಧಿಸೂಚನೆಯನ್ನು ಹೊರಡಿಸಿದ್ದು, ಪ್ರಕ್ರಿಯೆಗಳು ಚಾಲ್ತಿಯಲ್ಲಿದ್ದು, ಶಿಕ್ಷಕರಿಂದ ವರ್ಗಾವಣಾ ಅರ್ಜಿ ಸಲ್ಲಿಸುವಿಕೆ ಪೂರ್ಣಗೊಂಡಿರುತ್ತದೆ. ಈ ಹಂತದಲ್ಲಿ ಹಲವಾರು ಡಿ.ಡಿ.ಓ ರವರುಗಳು ಈ ಕಛೇರಿಗೆ ಮನವಿಗಳನ್ನು ಸಲ್ಲಿಸಿ ಶಿಕ್ಷಕರ ಸೇವಾ ಮಾಹಿತಿಯನ್ನು ತಂತ್ರಾಂಶದಲ್ಲಿ ಇಂದೀಕರಿಸಲು ಅವಕಾಶ ನೀಡುವಂತೆ ಕೋರುತ್ತಿರುವುದು ವಿಷಾದನೀಯ. ತಂತ್ರಾಂಶದಲ್ಲಿ ಇಂದೀಕರಣ ಕಾರ್ಯವನ್ನು ಪೂರ್ಣಗೊಳಿಸಲು ಈ ಹಿಂದೆಯೇ ಹಲವಾರು ಬಾರಿ ಅವಕಾಶ ಕಲ್ಪಿಸಿದ್ದರೂ, ಸಹ ಸಂಬಂಧಿಸಿದ ಡಿ.ಡಿ.ಓ ರವರುಗಳು ಸದರಿ ಕಾರ್ಯದ ಮಹತ್ವವನ್ನು ಅರಿಯದೇ ಉದಾಸೀನತೆ ತೋರಿರುವುದು ಕಂಡುಬಂದಿರುತ್ತದೆ. ಡಿ.ಡಿ.ಓ ರವರುಗಳ ಈ ಬೇಜವಾಬ್ದಾರಿತನದಿಂದಾಗಿ ಶಿಕ್ಷಕರುಗಳ ವರ್ಗಾವಣಾ ಅರ್ಜಿಯಲ್ಲಿ ಲೋಪ-ದೋಷಗಳು ಇದ್ದು, ಇದರಿಂದ ಶಿಕ್ಷಕರುಗಳು ಅನಗತ್ಯ ತೊಂದರೆಯನ್ನು ಎದುರಿಸುವಂತಾಗಿದ್ದು, ಇದರಿಂದ ಇಲಾಖೆಗೆ ಮುಜುಗರ ಉಂಟಾಗಿರುತ್ತದೆ. ಹಾಗೂ ವರ್ಗಾವಣಾ ಪ್ರಕ್ರಿಯೆಗಳನ್ನು ನಿಗಧಿತ ಕಾಲಾವಧಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಾಗದೇ ಇರುವುದನ್ನು ಗಮನಿಸಿದೆ.

**[ಪುಟ...2ಕ್ಕೆ]**

ಈ ಹಿನ್ನೆಲೆಯಲ್ಲಿ ಶಿಕ್ಷಕರ ಸೇವಾ ಮಾಹಿತಿಯನ್ನು (EEDS) ತಂತ್ರಾಂಶದಲ್ಲಿ ಇಂದೀಕರಿಸಲು ದಿನಾಂಕ:03/12/2020 ರಿಂದ 04/12/2020ರವರೆಗೆ ಅವಕಾಶ ಕಲ್ಪಿಸಲಾಗಿದೆ. ದಿನಾಂಕ:04/12/2020ರ ಅಪರಾಹ್ನ 05–30 ರವರೆಗೆ ತಂತ್ರಾಂಶದಲ್ಲಿ ಇಂದೀಕರಣ ಕಾರ್ಯವನ್ನು ಪೂರ್ಣಗೊಳಿಸಲು ನಿಗಧಿಪಡಿಸಿದ ಅಂತಿಮ ಗಡುವಾಗಿರುತ್ತದೆ. ಪ್ರಯುಕ್ತ ಸಂಬಂಧಿಸಿದ ಡಿ.ಡಿ.ಓ ರವರುಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉದ್ದೇಶಿತ ಕಾರ್ಯವನ್ನು ಪೂರ್ಣಗೊಳಿಸಲು ಸೂಚಿಸಿದೆ.

ಈ ಅವಧಿಯನ್ನು ಮೀರಿ ಶಿಕ್ಷಕರ ಸೇವಾ ಮಾಹಿತಿಯನ್ನು ತಂತ್ರಾಂಶದಲ್ಲಿ ಇಂದೀಕರಿಸಲು ವಿಫಲರಾದಲ್ಲಿ ಸಂಬಂಧಿಸಿದ ಡಿ.ಡಿ.ಓ ರವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ [ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು] ನಿಯಮಗಳು–1957ರಡಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದೆ.

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

**[ಸಿರಿಯಣ್ಣವರ ಲಲಿತಾ ಚಂದ್ರಶೇಖರ]**
**ನಿರ್ದೇಶಕರು[ಅಲ್ಪಸಂಖ್ಯಾತ ಭಾಷಾ ನಿರ್ದೇಶನಾಲಯ]**
**ಹಾಗೂ ವರ್ಗಾವಣಾ ಕೋಶದ ಮುಖ್ಯಸ್ಥರು**

**ಇವರಿಗೆ, ಅಗತ್ಯ ಕ್ರಮಕ್ಕಾಗಿ**

1) ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಕಲ್ಬುರ್ಗಿ/ಬೆಳಗಾವಿ
2) ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
3) ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
4) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)
5) ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳ ಮುಖ್ಯಶಿಕ್ಷಕರು ರವರುಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)

**ಪ್ರತಿಯನ್ನು:–**

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರುಗಿ/ಧಾರವಾಡ
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ.
7. ಹಿರಿಯ ಸಹಾಯಕ ನಿರ್ದೇಶಕರು, ಇ–ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–01
8. ಇಲಾಖಾ ವೆಬ್–ಸೈಟ್ನಲ್ಲಿ ಪ್ರಕಟಣೆಗಾಗಿ ಇ–ಆಡಳಿತ ಶಾಖೆಗೆ.
9. ಕಛೇರಿ ಪ್ರತಿ.